**ದಿನಾಂಕ 30.09.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**
**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು ನಿಪಿ **1** ಎಂದು, ದೂರಿನ ದೃಢೀಕೃತ ಪ್ರತಿಯನ್ನು ನಿಪಿ **2** ಎಂದು, ನ್ಯಾಯಾಲಯಕ್ಕೆ ಸಲ್ಲಿಸಿರುವ ಮನವಿಯ ಧೃಡಿಕೃತ ಪ್ರತಿಯನ್ನು ನಿಪಿ **3** ಎಂದು, ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿಯನ್ನು ನಿಪಿ **4** ಎಂದು, ನಕ್ಷೆಯ ದೃಢೀಕೃತ ಪ್ರತಿಯನ್ನು ನಿಪಿ **5** ಎಂದು, ಐಎಮ್‌ವಿ ವರದಿಯ ದೃಢೀಕೃತ ಪ್ರತಿಯನ್ನು ನಿಪಿ **6** ಎಂದು, ಶವ ತನಿಖಾ ವರದಿಯ ದೃಢೀಕೃತ ಪ್ರತಿಯನ್ನು ನಿಪಿ **7** ಎಂದು, ಶವ ಪರೀಕ್ಷಾ ವರದಿಯ ದೃಢೀಕೃತ ಪ್ರತಿಯನ್ನು ನಿಪಿ **8** ಎಂದು, ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿಯನ್ನು ನಿಪಿ **9** ಎಂದು, ಮೋಟಾರು ವಾಹನ ಕಯ್ದೆಯ ಕಲಂ 133 ರಡಿ ನೀಡಿರುವ ನೋಟೀಸು ಮತ್ತು ಸದರಿ ನೋಟೀಸಿಗೆ ನೀಡಿರುವ ಉತ್ತರದ ದೃಢೀಕೃತ ಪ್ರತಿಗಳನ್ನು ಕ್ರಮವಾಗಿ ನಿಪಿ **10 ಮತ್ತು 11** ಎಂದು, ಆಧಾರ್ ಕಾರ್ಡ್ ಗಳ ನೋಟರಿ ಪ್ರತಿ(ಮೂಲ ದಾಖಲಾತಿಗಳೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಗಳನ್ನು ಹಿಂದಿರುಗಿಸಲಾಯಿತು)ಗಳನ್ನು ಒಟ್ಟಾಗಿ ನಿಪಿ **12** ಎಂದು, ಮೃತನ ವ್ಯಾಸಂಗ ಪ್ರಮಾಣ ಪತ್ರವನ್ನು ನಿಪಿ **13** ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1** ನೇ ಎಸ್‌ಸಿಜೆ ಮತ್ತು ಎಸಿಜೆಎಮ್

ಬೆಂಗಳೂರು